# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 394
ವಿಧಾನ ಸಭೆಯ ಸದಸ್ಯರ ಹೆಸರು : ಶ್ರೀ ಕೆ. ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 12.12.2018
ಉತ್ತರಿಸುವವರು : ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಇಲ್ಲಿಯವರೆಗೆ ಎಷ್ಟು ವಿಜ್ಞಾನ ಕೇಂದ್ರಗಳನ್ನು ಸ್ಥಾಪಿಸಲಾಗಿದೆ | ರಾಜ್ಯದಲ್ಲಿ ಪ್ರಸ್ತುತದವರೆಗೆ 2 ಪ್ರಾದೇಶಿಕ ವಿಜ್ಞಾನ ಕೇಂದ್ರ ಹಾಗೂ 4 ಉಪ-ಪ್ರಾದೇಶಿಕ ವಿಜ್ಞಾನ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. |
| ಆ) | ಪ್ರತಿ ಜಿಲ್ಲೆಯಲ್ಲಿಯೂ ವಿಜ್ಞಾನ ಕೇಂದ್ರವನ್ನು ಸ್ಥಾಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು (ವಿವರ ನೀಡುವುದು) | ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯು ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಒಂದೊಂದು ವಿಜ್ಞಾನ ಕೇಂದ್ರ ಸ್ಥಾಪಿಸಲು ಅಗತ್ಯ ಕ್ರಮಕೈಗೊಳ್ಳುತ್ತಿದೆ.<br><br>ಈಗಾಗಲೇ ಇಲಾಖೆಯು ಭಾರತ ಸರ್ಕಾರದ ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ರಾಷ್ಟ್ರೀಯ ವಿಜ್ಞಾನ ವಸ್ತು ಸಂಗ್ರಹಾಲಯಗಳ ಪರಿಷತ್‌ನ ಮೂಲಕ ಸಮಾನ ಅನುಪಾತದ ಅನುದಾನ ಹಂಚಿಕೆಯ ಆಧಾರದ ಮೇಲೆ ಧಾರವಾಡ ಮತ್ತು ಮಂಗಳೂರು ಜಿಲ್ಲಾ ಕೇಂದ್ರಗಳಲ್ಲಿ ದೊಡ್ಡಮಟ್ಟದ ಪ್ರಾದೇಶಿಕ ವಿಜ್ಞಾನ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಅವುಗಳು ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿವೆ.<br><br>ಅಲ್ಲದೇ, ಉಪ-ಪ್ರಾದೇಶಿಕ ವಿಜ್ಞಾನ ಕೇಂದ್ರಗಳನ್ನು ಪ್ರತಿ ಜಿಲ್ಲೆಗೆ ಒಂದರಂತೆ ರಾಜ್ಯ ಸರ್ಕಾರದ ಸಂಪೂರ್ಣ ಅನುದಾನವಾದ ರೂ. 4.00 ಕೋಟಿಗಳ ವೆಚ್ಚದಲ್ಲಿ ಹಂತ-ಹಂತವಾಗಿ ಸ್ಥಾಪಿಸಲು ಕ್ರಮಕೈಗೊಳ್ಳಲಾಗುತ್ತಿದೆ. ಈಗಾಗಲೇ ರಾಜ್ಯದಲ್ಲಿ ಒಟ್ಟು 22 ಉಪ-ಪ್ರಾದೇಶಿಕ ವಿಜ್ಞಾನ ಕೇಂದ್ರಗಳ ಸ್ಥಾಪನೆಗೆ ಅನುಮೋದನೆ ನೀಡಲಾಗಿದ್ದು, ಅವುಗಳ ಸ್ಥಾಪನೆ ವಿವಿಧ ಹಂತದಲ್ಲಿರುತ್ತವೆ.<br><br>ಅವುಗಳಲ್ಲಿ 4 ಉಪ-ಪ್ರಾದೇಶಿಕ ವಿಜ್ಞಾನ ಕೇಂದ್ರಗಳು (ಬಳ್ಳಾರಿ, ಬೀದರ್, ಕಾರವಾರ ಮತ್ತು ರಾಯಚೂರು) ಈಗಾಗಲೇ ಸ್ಥಾಪನೆಗೊಂಡಿದ್ದು, 5 ಉಪ-ಪ್ರಾದೇಶಿಕ ವಿಜ್ಞಾನ ಕೇಂದ್ರಗಳ (ಬಾಗಲಕೋಟೆ, ಕೊಪ್ಪಳ, ದಾವಣಗೆರೆ, ಗೌರಿಬಿದನೂರು (ಚಿಕ್ಕಬಳ್ಳಾಪುರ ಜಿಲ್ಲೆ) ಮತ್ತು ಹಾವೇರಿ) ಕಾಮಗಾರಿ ಪ್ರಗತಿಯಲ್ಲಿದೆ. |

| | | |
|---|---|---|
| | | 13 ವಿಜ್ಞಾನ ಕೇಂದ್ರಗಳಲ್ಲಿ (ತುಮಕೂರು, ಬೆಳಗಾವಿ, ಹಾಸನ, ಮಡಿಕೇರಿ, ಶಿವಮೊಗ್ಗ, ಚಾಮರಾಜನಗರ, ವಿಜಯಪುರ, ಚಿಕ್ಕಮಗಳೂರು, ಉಡುಪಿ, ಚಿತ್ತಾಪುರ, ಚಿಕ್ಕೋಡಿ, ಯಾದಗಿರಿ ಮತ್ತು ಗದಗ) ಸ್ಥಾಪನೆಗೆ ಅಗತ್ಯವಾದ ಭೂಮಿ ಗುರುತಿಸಲಾಗಿದ್ದು, ಹಂತ ಹಂತವಾಗಿ ಕಾಮಗಾರಿಗೆ ಚಾಲನೆ ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಉಳಿದ 4 ಜಿಲ್ಲೆಗಳಲ್ಲಿ (ಮಂಡ್ಯ, ರಾಮನಗರ, ಕೋಲಾರ ಮತ್ತು ಚಿತ್ರದುರ್ಗ) ಉಪ-ಪ್ರಾದೇಶಿಕ ವಿಜ್ಞಾನ ಕೇಂದ್ರಗಳು ಇನ್ನೂ ಅನುಮೋದನೆ ನೀಡಬೇಕಾಗಿದ್ದು, ಸದರಿ ಜಿಲ್ಲೆಗಳಲ್ಲಿ ಮುಂದಿನ ವರ್ಷಗಳಲ್ಲಿ ವಿಜ್ಞಾನ ಕೇಂದ್ರ ಸ್ಥಾಪಿಸಲು ಕ್ರಮಕೈಗೊಳ್ಳಲಾಗುವುದು.<br><br>ಒಟ್ಟಾರೆಯಾಗಿ, ರಾಜ್ಯದಲ್ಲಿ 2 ಪ್ರಾದೇಶಿಕ ವಿಜ್ಞಾನ ಕೇಂದ್ರಗಳು ಹಾಗೂ 4 ಉಪ-ಪ್ರಾದೇಶಿಕ ವಿಜ್ಞಾನ ಕೇಂದ್ರಗಳು ಸ್ಥಾಪನೆಗೊಂಡಿದ್ದು, 18 ಉಪ-ಪ್ರಾದೇಶಿಕ ವಿಜ್ಞಾನ ಕೇಂದ್ರಗಳ ಸ್ಥಾಪನೆಯು ವಿವಿಧ ಹಂತಗಳಲ್ಲಿವೆ. |
| ಇ)<br><br><br><br>ಈ) | ಮೈಸೂರಿನಲ್ಲಿ ವಿಜ್ಞಾನ ಕೇಂದ್ರವನ್ನು ಸ್ಥಾಪಿಸಲು ಸರ್ಕಾರ ಉದ್ದೇಶಿಸಿದೆಯೇ;<br><br>ಹಾಗಿದ್ದಲ್ಲಿ, ಅವುಗಳನ್ನು ಎಲ್ಲಿ ಮತ್ತು ಯಾವಾಗ ಸ್ಥಾಪಿಸಲಾಗುವುದು? | ಮೈಸೂರಿನಲ್ಲಿ ಪ್ರಾದೇಶಿಕ ವಿಜ್ಞಾನ ಕೇಂದ್ರವನ್ನು ಮೈಸೂರು ವಿಶ್ವವಿದ್ಯಾಲಯದ ಆವರಣದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಮಪಾಲಿನ ಸಹಭಾಗಿತ್ವದಲ್ಲಿ ರೂ. 14.50 ಕೋಟಿಗಳ ವೆಚ್ಚದಲ್ಲಿ ಸ್ಥಾಪಿಸುವುದಕ್ಕೆ ಕ್ರಮಕೈಗೊಳ್ಳಲಾಗಿತ್ತು.<br><br>ಆದರೆ, ಉದ್ದೇಶಿತ ಪ್ರಾದೇಶಿಕ ವಿಜ್ಞಾನ ಕೇಂದ್ರ ಸ್ಥಾಪನೆಯಾಗುತ್ತಿದ್ದ ಪ್ರದೇಶವು ಕುಕ್ಕರಹಳ್ಳಿ ಕೆರೆಗೆ ಸಮೀಪದಲ್ಲಿದ್ದುದರಿಂದ, ಸದರಿ ಜಾಗದಲ್ಲಿ ವಿಜ್ಞಾನ ಕೇಂದ್ರ ಸ್ಥಾಪಿಸಲು ಪರಿಸರವಾದಿಗಳಿಂದ ವಿರೋಧ ವ್ಯಕ್ತವಾಗಿರುವುದರಿಂದ, ಬೇರೆ ಜಮೀನಿನಲ್ಲಿ ಸದರಿ ಕೇಂದ್ರವನ್ನು ಸ್ಥಾಪಿಸಲು ಸರ್ಕಾರದ ಪರಿಶೀಲನೆಯಲ್ಲಿದೆ. |

ಸಂಖ್ಯೆ: ವಿಯಇ 269 ವಿತ್ರಮ 2018

(ಕೆ.ಜೆ. ಜಾರ್ಜ್) 11/12/18

ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ,
ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.